ಅ) *ಕರ್ನಾಟಕ ರಾಜ್ಯ ರೇಷ್ಮೆ ಕೈಗಾರಿಕೆ ನಿಗಮವನ್ನು ಸರ್ಕಾರದವರು ಖಾಸಗೀಕರಣ ಮಾಡಲು ಉದ್ದೇಶಿಸಿದ್ದಾರೆಯೇ?*

ಆ) *ಹಾಗಿದ್ದಲ್ಲಿ ಖಾಸಗೀಕರಣ ಮಾಡಲು ಕಾರಣಗಳೇನು?*

ಇ) *ಖಾಸಗೀಕರಣಕ್ಕೆ ನಿಗಮದ ಕಾರ್ಮಿಕ ಸಂಘಟನೆಗಳ ವಿರೋಧವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಈ) *ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?*

ಶ್ರೀ ಎಂ. ವರದೇಗೌಡ (ರೇಷ್ಮೆ ರಾಜ್ಯ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಮಂಗಳೂರು ಮಹಾನಗರಕ್ಕೆ ಕುಡಿಯುವ ನೀರಿನ ಯೋಜನೆ

2979- ಶ್ರೀ ಎಸ್. ಯೋಗೀಶ್ ಭಟ್ (ಮಂಗಳೂರು) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಮಂಗಳೂರು ಮಹಾನಗರ ಪಾಲಿಕೆಗೆ 50 ವರ್ಷಗಳ ಬೆಳವಣಿಗೆಯನ್ನು ಗಮನದಲ್ಲಿಟ್ಟು ತೃತೀಯ ಹಂತದ ಕುಡಿಯುವ ನೀರಿನ ಯೋಜನೆ ಆರಂಭಿಸಲು ಸರಕಾರ ಕೈಗೊಂಡಿರುವ ಕಾರ್ಯಕ್ರಮಗಳೇನು?*

ಆ) *ಒಳಚರಂಡಿ ಯೋಜನೆ ಅಭಿವೃದ್ಧಿಗೊಳಿಸಲು, ಸುವ್ಯವಸ್ಥಿತಗೊಳಿಸಲು ಕೈಗೊಂಡಿರುವ ಕ್ರಮಗಳೇನು?*

ಶ್ರೀ ಬಿ. ಎನ್. ಬಚ್ಚೇಗೌಡ (ನಗರಾಭಿವೃದ್ಧಿ ಸಚಿವರು) :

ಅ) ಮಂಗಳೂರು ಮಹಾನಗರ ಪಾಲಿಕೆಯವರು ಒಂದು ಸಮಗ್ರ ಕುಡಿಯುವ ನೀರಿನ ಮತ್ತು ಒಳಚರಂಡಿ ಯೋಜನೆಗಳನ್ನು ತಯಾರಿಸಲು ಮಹಾನಗರ ಪಾಲಿಕೆಯು ಪ್ರಸ್ತಾಪಿಸಿದೆ. ಈ ಎರಡು ಯೋಜನೆಗಳನ್ನು ಮುಂದಿನ 50 ವರ್ಷಗಳ ಬೆಳವಣಿಗೆಯನ್ನು ಗಮನದಲ್ಲಿಟ್ಟುಕೊಂಡು ವಿನ್ಯಾಸ ಮಾಡಬೇಕಾಗಿದೆ. ಸಮಗ್ರ ನೀರು ಸರಬರಾಜು ಮತ್ತು ಒಳಚರಂಡಿ ಯೋಜನೆಯನ್ನು ತಯಾರಿಸಿದ ನಂತರ ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು.

ಆ) ಪ್ರಶ್ನೆ 'ಅ' ನಲ್ಲಿ ತಿಳಿಸಿರುವ ರೀತಿ ಈ ಯೋಜನೆ ತಯಾರಾದ ಮೇಲೆ ಮುಂದಿನ ಕ್ರಮ ಕೈಗೊಳ್ಳಲಾಗುವುದು.